**ಕರ್ನಾಟಕ ಸರ್ಕಾರ**

ಸಂಖ್ಯೆ:ಸಿಆಸುಇ 25 ಆರ್‌ಟಿಐ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
ಇಲಾಖೆ(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 14.03.2016.

**ಸುತ್ತೋಲೆ**

ವಿಷಯ: ಮಾಹಿತಿ ಹಕ್ಕು ಅಧಿನಿಯಮ, 2005ರ ಸಮಗ್ರ ಅನುಷ್ಠಾನಕ್ಕಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಮಿತಿಯ 6ನೇ ಸಭೆಯ ನಡವಳಿಗಳು.

---0---

ಮಾಹಿತಿ ಹಕ್ಕು ಅಧಿನಿಯಮ, 2005ರ ಸಮಗ್ರ ಅನುಷ್ಠಾನಕ್ಕಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಮಿತಿಯ 6ನೇ ಸಭೆಯ ನಡವಳಿಯ ಕಂಡಿಕೆ 2 ರಲ್ಲಿ ತೀರ್ಮಾನಿಸಿದಂತೆ, ಮಾಹಿತಿ ಹಕ್ಕು ಅಧಿನಿಯಮ, 2005ರ ಪ್ರಕರಣ 4(1)(ಎ) ಮತ್ತು 4(1)(ಬಿ) ಕುರಿತಂತೆ ಇನ್ನೂ ಮಾಹಿತಿಯನ್ನು ತಯಾರಿಸದೇ ಇರುವ ಇಲಾಖೆಗಳಿಗೆ ಮಾಹಿತಿಯನ್ನು ತಯಾರಿಸಿ, ತಮ್ಮ ಇಲಾಖೆಗಳ ವೆಬ್‌ಸೈಟ್‌ಗಳಲ್ಲಿ ಪ್ರಕಟಿಸುವಂತೆ ಹಾಗೂ ಕಂಡಿಕೆ 3 ರಲ್ಲಿ ತೀರ್ಮಾನಿಸಿದಂತೆ, ಮಾಹಿತಿ ಹಕ್ಕು ಅಧಿನಿಯಮ, 2005ರನ್ವಯ ಸಚಿವಾಲಯದ ಇಲಾಖೆಗಳಲ್ಲಿ ನೇಮಕ ಮಾಡಲ್ಪಡುವ ಮೊದಲ ಮೇಲ್ಮನವಿ ಪ್ರಾಧಿಕಾರಿಯು ಸದರಿ ಇಲಾಖೆಯ ಎರಡನೇ ಹಿರಿಯ ಅಧಿಕಾರಿಯಾಗಿರತಕ್ಕದ್ದೆಂದು ತಿಳಿಸಿದೆ.

ಸಮಿತಿಯ ತೀರ್ಮಾನದನ್ವಯ ಕ್ರಮ ಕೈಗೊಳ್ಳುವಂತೆ ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳಿಗೆ ತಿಳಿಸಲು ಕೋರಿದೆ.

**(ಪರಮೇಶ್ ಪಾಂಡೆ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/
ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು